# ಕರ್ನಾಟಕ ವಿಧಾನ ಪರಿಷತ್ತು

## ಲಘು ಪ್ರಕಟಣೆ ಭಾಗ -2

**(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)**

**ಸೋಮವಾರ, ದಿನಾಂಕ: 09ನೇ ಏಪ್ರಿಲ್, 2018**

**ಸಂಖ್ಯೆ: 11**

ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 7ರ ಉಪ ಕಲಂ (1) ರಲ್ಲಿ ಉಲ್ಲೇಖಿಸಿರುವಂತೆ ಸರ್ಕಾರಿ ನೌಕರನಲ್ಲದ ಪ್ರತಿಯೊಬ್ಬ ಸಾರ್ವಜನಿಕ ನೌಕರನು ತನ್ನ ಮತ್ತು ತನ್ನ ಕುಟುಂಬದ ಸದಸ್ಯರ ಆಸ್ತಿ ಮತ್ತು ದಾಯಿತ್ವಗಳ ಪಟ್ಟಿಯನ್ನು ನಿಗದಿತ ನಮೂನೆಯಲ್ಲಿ ಪ್ರತಿ ವರ್ಷ ಜೂನ್ ತಿಂಗಳ 30 ರೊಳಗಾಗಿ ಲೋಕಾಯುಕ್ತರಿಗೆ ಸಲ್ಲಿಸತಕ್ಕದ್ದು. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ/18/ಸೇಲೋಯು/2008, ದಿನಾಂಕ: 25.01.2010 ರಲ್ಲಿ ತಿದ್ದುಪಡಿ ಮಾಡಿರುವಂತೆ, ಕರ್ನಾಟಕ ಶಾಸಕಾಂಗದ ಸದಸ್ಯರು 2017-18ನೇ ಸಾಲಿನ ತಮ್ಮ ಮತ್ತು ತಮ್ಮ ಕುಟುಂಬದ ಸದಸ್ಯರ ಆಸ್ತಿ ಮತ್ತು ದಾಯಿತ್ವಗಳ ಪಟ್ಟಿಯನ್ನು ನಿಗಧಿತ ನಮೂನೆಯಲ್ಲಿ ಪ್ರತಿ ಪುಟಕ್ಕೂ ಹಾಗೂ ಲಗತ್ತುಗಳಿಗೂ ಸಹಿ ಮಾಡಿ, ಪುಟ ಸಂಖ್ಯೆಯೊಂದಿಗೆ ನಿಗದಿತ ಅವಧಿಯೊಳಗೆ ನೇರವಾಗಿ ಲೋಕಾಯುಕ್ತಕ್ಕೆ ಸಲ್ಲಿಸಬೇಕೆಂದು ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು, ಇವರು ತಮ್ಮ ಪತ್ರದಲ್ಲಿ ತಿಳಿಸಿರುತ್ತಾರೆ.

ಆದುದರಿಂದ, ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳು 2017-18ನೇ ಸಾಲಿನ ತಮ್ಮ ಮತ್ತು ತಮ್ಮ ಕುಟುಂಬದ ಸದಸ್ಯರ ಆಸ್ತಿ ಮತ್ತು ದಾಯಿತ್ವಗಳ ಪಟ್ಟಿಯನ್ನು ಈ ಲಘು ಪ್ರಕಟಣೆಯೊಂದಿಗೆ ಲಗತ್ತಿಸಲಾಗಿರುವ ನಮೂನೆಯಲ್ಲಿ (ಕನ್ನಡ ಮತ್ತು ಆಂಗ್ಲ) **ದಿನಾಂಕ: 30ನೇ ಜೂನ್, 2018**ರೊಳಗಾಗಿ ಲೋಕಾಯುಕ್ತಕ್ಕೆ ನೇರವಾಗಿ ಸಲ್ಲಿಸಬೇಕೆಂದು ಈ ಮೂಲಕ ಮಾನ್ಯ ಸದಸ್ಯರುಗಳ ಗಮನಕ್ಕೆ ತರಲಾಗಿದೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

**ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳಿಗೆ.**